All India Radio: Bangalore
National Bulletin In Kannada
12.01.2026  19.35 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಗುಜರಾತ್‌ನಲ್ಲಿಂದು ಜರ್ಮನ್ ಚಾನ್ಸಲರ್ ಫ್ರೆಡ್ರಿಕ್ ಮರ್ಜ್ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ ; ಒಟ್ಟು ೧೯ ಒಪ್ಪಂದಗಳಿಗೆ ಸಹಿ
- ವಿಕಸಿತ ಭಾರತ ಯುವ ನಾಯಕರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಸಂವಾದ
- ಫೆಬ್ರವರಿ ೧ ರಂದು ಕೇಂದ್ರ ಬಜೆಟ್ ಮಂಡನೆ; ಜನವರಿ ೨೮ ರಿಂದ ಅಧಿವೇಶನ ಆರಂಭ
- ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್; ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫೀಲ್ಡಿಂಗ್ ಆಯ್ಕೆ

****************

ಭಾರತಕ್ಕೆ ಎರಡು ದಿನಗಳ ಅಧಿಕೃತ ಪ್ರವಾಸ ಕೈಗೊಂಡಿರುವ ಜರ್ಮನಿಯ ಚಾನ್ಸೆಲರ್ ಫ್ರೆಡ್ರಿಕ್ ಮರ್ಜ್ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಗುಜರಾತ್‌ನ ಗಾಂಧಿನಗರದಲ್ಲಿರುವ ಮಹಾತ್ಮ ಮಂದಿರದಲ್ಲಿಂದು ನಿಯೋಗ ಮಟ್ಟದ ದ್ವಿಪಕ್ಷೀಯ ಮಾತುಕತೆ ನಡೆಸಿದರು.

ವ್ಯಾಪಾರ, ಹೂಡಿಕೆ ಮತ್ತು ಉನ್ನತ ತಂತ್ರಜ್ಞಾನ, ವಿಜ್ಞಾನ ಆವಿಷ್ಕಾರ ಮತ್ತು ಸಂಶೋಧನೆ ಸೇರಿದಂತೆ ಹಲವು ಪ್ರಮುಖ ವಲಯಗಳಿಗೆ ಸಂಬಂಧಿಸಿದ ಚರ್ಚೆ ನಡೆಸಿದರು. ಇದು ದ್ವಿಪಕ್ಷೀಯ ಸಂಬಂಧಗಳಲ್ಲಿ ಹೊಸ ಅಧ್ಯಾಯವನ್ನು ಆರಂಭಿಸುತ್ತದೆ.

ರಕ್ಷಣಾ ಕೈಗಾರಿಕಾ ಸಹಕಾರವನ್ನು ಬಲಪಡಿಸುವ ಸಲುವಾಗಿ, ಎರಡೂ ರಾಷ್ಟ್ರಗಳು ಪರಸ್ಪರ ಅಭಿವೃದ್ಧಿ ಮತ್ತು ಪರಸ್ಪರ ಉತ್ಪಾದನೆಯ ಮೇಲೆ ಕೇಂದ್ರೀಕರಿಸಿದ ಘೋಷಣೆಗೆ ಸಹಿ ಹಾಕಿದವು.

ಭಾರತ ಮತ್ತು ಜರ್ಮನಿ ಕೇವಲ ಆರ್ಥಿಕ ಪಾಲುದಾರರಲ್ಲ, ಆದರೆ ಜಾಗತಿಕ ಶಾಂತಿ ಮತ್ತು ಸ್ಥಿರತೆಗೆ ಬದ್ಧವಾಗಿರುವ ಎರಡು ರಾಷ್ಟ್ರಗಳ, ದ್ವಿಪಕ್ಷೀಯ ವ್ಯಾಪಾರವು ದಾಖಲೆಯ ೫೦ ಶತಕೋಟಿ ಡಾಲರ್‌ಗಳನ್ನು ಮೀರಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

ಭಾರತ-ಜರ್ಮನಿ ಪಾಲುದಾರಿಕೆಯು ಭವಿಷ್ಯದತ್ತ ಗಮನಹರಿಸುತ್ತದೆ, ವಿಶೇಷವಾಗಿ ಹಸಿರು ಶಕ್ತಿ ಮತ್ತು ಸುಧಾರಿತ ತಂತ್ರಜ್ಞಾನದ ಕ್ಷೇತ್ರಗಳಲ್ಲಿ, ಮತ್ತು ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಎರಡೂ ರಾಷ್ಟ್ರಗಳು ಸರ್ವಾನುಮತದಿಂದ ಒಂದುಗೂಡಿವೆ ಎಂದು ಅವರು ಒತ್ತಿ ಹೇಳಿದರು.

ಹೆಚ್ಚಿದ ಜಂಟಿ ನೌಕಾ ಮತ್ತು ವಾಯುಪಡೆಯ ಸಮರಾಭ್ಯಾಸ ಸೇರಿದಂತೆ ಈ ಆಳವಾದ ಮಿಲಿಟರಿ ಸಂಬಂಧಗಳು ಭಾರತವು ತನ್ನ ರಕ್ಷಣಾ ಅವಲಂಬನೆಗಳನ್ನು ವೈವಿಧ್ಯಗೊಳಿಸಲು ಸಹಾಯ ಮಾಡುತ್ತದೆ ಎಂದು ಚಾನ್ಸೆಲರ್ ಮೆರ್ಜ್ ಹೇಳಿದರು.

ಆರ್ಥಿಕ ರಂಗದಲ್ಲಿ, ಮತ್ತಷ್ಟು ಅಭಿವೃದ್ಧಿಗಾಗಿ ಭಾರತ-ಯುರೋಪಿಯನ್ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದವನ್ನು ಅಂತಿಮಗೊಳಿಸುವ ತಮ್ಮ ಬದ್ಧತೆಯನ್ನು ಉಭಯ ನಾಯಕರು ಪುನರುಚ್ಚರಿಸಿದರು.

ಚರ್ಚೆಗಳ ಪ್ರಮುಖ ಗಮನ, ಕೌಶಲ್ಯ ಅಭಿವೃದ್ಧಿ ಮತ್ತು ವಲಸೆಯಾಗಿತ್ತು. ಐಟಿ ಮತ್ತು ಎಂಜಿನಿಯರಿಂಗ್ ವಲಯಗಳಲ್ಲಿ ಬೇಡಿಕೆ ಹೆಚ್ಚಿರುವ ಜರ್ಮನಿಯಲ್ಲಿ ಭಾರತೀಯ ಆರೋಗ್ಯ ವೃತ್ತಿಪರರು ಮತ್ತು ಕೌಶಲ್ಯಪೂರ್ಣ ಕೆಲಸಗಾರರಿಗೆ ಅವಕಾಶಗಳನ್ನು ಸುಗಮಗೊಳಿಸಲು ಹೊಸ ಚೌಕಟ್ಟನ್ನು ಸ್ಥಾಪಿಸಲಾಯಿತು. ನಾವೀನ್ಯತೆ ಕ್ಷೇತ್ರದಲ್ಲಿ, ಎರಡೂ ದೇಶಗಳು ನವೀಕರಿಸಬಹುದಾದ ಇಂಧನಕ್ಕಾಗಿ ಶ್ರೇಷ್ಠತೆಯ ಕೇಂದ್ರವನ್ನು ಪ್ರಾರಂಭಿಸಿದವು ಮತ್ತು ಕೃತಕ ಬುದ್ಧಿಮತ್ತೆ ಮತ್ತು ಹಸಿರು ಅಮೋನಿಯಾ ಉತ್ಪಾದನೆಯಲ್ಲಿ ಸಹಕಾರವನ್ನು ತೀವ್ರಗೊಳಿಸಿದವು.

ನಾಳೆ ಚಾನ್ಸಲರ್ ಫ್ರೆಡ್ರಿಕ್ ಮೆರ್ಜ್, ಬೆಂಗಳೂರಿನ ಆಡುಗೋಡಿಯಲ್ಲಿರುವ ಭಾರತ-ಜರ್ಮನಿ ಸಹಯೋಗದ ಬಾಷ್ ಆವಿಷ್ಕಾರ ಮತ್ತು ತಯಾರಿಕಾ ಘಟಕಕ್ಕೆ ಭೇಟಿ ನೀಡಲಿದ್ದಾರೆ.

*****************

ಭಾರತ ಮತ್ತು ಜರ್ಮನಿ ಒಟ್ಟು ೧೯ ಪ್ರಮುಖ ಒಪ್ಪಂದ ಪತ್ರಗಳಿಗೆ ಸಹಿ ಹಾಕಿದ್ದು, ದ್ವಿಪಕ್ಷೀಯ ರಕ್ಷಣಾ ಕೈಗಾರಿಕಾ ಸಹಕಾರವನ್ನು ಬಲಪಡಿಸಲು ಸಂಯುಕ್ತ ಉದ್ದೇಶ ಘೋಷಣೆ ಮತ್ತು ವ್ಯಾಪಾರ ಹಾಗೂ ಹೂಡಿಕೆಗೆ ಉತ್ತೇಜನ ನೀಡಲು ಮುಖ್ಯ ಕಾರ್ಯನಿರ್ವಾಹಣಾ ಅಧಿಕಾರಿಗಳ ವೇದಿಕೆಯ ಸ್ಥಾಪನೆ ಸೇರಿದಂತೆ ಎಂಟು ಪ್ರಮುಖ ಘೋಷಣೆಗಳನ್ನು ಮಾಡಿವೆ.

ಸುದ್ದಿಗಾರರನ್ನು ಉದ್ದೇಶಿಸಿ ಮಾತನಾಡಿದ ಭಾರತದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ, ಜರ್ಮನ್ ಚಾನ್ಸಲರ್ ಅವರ ಭಾರತ ಭೇಟಿಯ ವೇಳೆ ರಕ್ಷಣಾ, ವ್ಯಾಪಾರ, ಕೌಶಲ್ಯ, ಹಸಿರು ಶಕ್ತಿ ಹಾಗೂ ಪರಸ್ಪರ ಸಂಬಂಧಗಳನ್ನು ಬಲಪಡಿಸುವಂತಹ ಕ್ಷೇತ್ರಗಳಲ್ಲಿ ಎರಡೂ ದೇಶಗಳ ನಡುವೆ ಮಹತ್ವದ ಸಂವಹನ ನಡೆಯಿತು ಎಂದು ಹೇಳಿದರು.

ಜರ್ಮನಿಯ ಮೂಲಕ ಭಾರತೀಯ ಪಾಸ್‌ಪೋರ್ಟ್ ಹೊಂದಿದವರಿಗೆ ವೀಸಾ ರಹಿತ ಟ್ರಾನ್ಸಿಟ್ ಸೌಲಭ್ಯವನ್ನು ಘೋಷಿಸಲಾಯಿತು. ಜೊತೆಗೆ, ಭಾರತೀಯ ಆರೋಗ್ಯ ವೃತ್ತಿಪರರ ನೇಮಕಾತಿಗಾಗಿ ಹೊಸ ಚೌಕಟ್ಟನ್ನೂ ಘೋಷಿಸಲಾಗಿದೆ.

ಹಸಿರು ಮತ್ತು ಸ್ಥಿರ ಅಭಿವೃದ್ಧಿ ಸಹಭಾಗಿತ್ವದ ಅಡಿಯಲ್ಲಿ, ನವೀಕರಿಸಬಹುದಾದ ಶಕ್ತಿ, ಹಸಿರು ಹೈಡ್ರೋಜನ್ ಹಾಗೂ ಹವಾಮಾನ ಸಹಿಷ್ಣು ನಗರ ಮೂಲಸೌಕರ್ಯವನ್ನು ಬೆಂಬಲಿಸಲು ಜರ್ಮನಿ ೧.೨೪ ಬಿಲಿಯನ್ ಯುರೋ ಅನುದಾನವನ್ನು ಘೋಷಿಸಿದೆ.

*****************

ಪ್ರಧಾನಮಂತ್ರಿ ಮೋದಿ ಅವರು ನವದೆಹಲಿಯಲ್ಲಿ ನಡೆಯುತ್ತಿರುವ "ವಿಕಸಿತ ಭಾರತ ಯುವ ನಾಯಕರು ಸಂವಾದ ೨೦೨೬" ಕೊನೆಯ ಅಧಿವೇಶನದಲ್ಲಿ ಭಾಗವಹಿಸಿದರು.

ಈ ಕಾರ್ಯಕ್ರಮವು ಮಹಾನ್ ಆಧ್ಯಾತ್ಮಿಕ ನಾಯಕ ಸ್ವಾಮಿ ವಿವೇಕಾನಂದರ ಜನ್ಮದಿನವನ್ನು ರಾಷ್ಟ್ರೀಯ ಯುವ ದಿನವಾಗಿ ಆಚರಿಸಲಾಗುತ್ತಿದೆ.

ಈ ಸಂದರ್ಭದಲ್ಲಿ ಪ್ರಧಾನಿ, ಪ್ರದರ್ಶನಕ್ಕೆ ಭೇಟಿ ನೀಡಿ ಯುವ ನಾಯಕರೊಂದಿಗೆ ಅವರ ನಾವೀನ್ಯತೆ ಮತ್ತು ಆಲೋಚನೆಗಳನ್ನು ತಿಳಿದುಕೊಳ್ಳಲು ಸಂವಾದ ನಡೆಸಿದರು.

*****************

ಕೇಂದ್ರ ಬಜೆಟ್ ೨೦೨೬-೨೭ ಫೆಬ್ರವರಿ ೧ ರಂದು ಲೋಕಸಭೆಯಲ್ಲಿ ಮಂಡನೆಯಾಗಲಿದೆ. ಸಂಸತ್ತಿನ ಬಜೆಟ್ ಅಧಿವೇಶನವು ಇದೇ ೨೮ ರಿಂದ ಆರಂಭವಾಗಿ ಏಪ್ರಿಲ್ ೨ರವರೆಗೆ ನಡೆಯಲಿದೆ. ಫೆಬ್ರವರಿ ೧ ರಂದು ಬೆಳಿಗ್ಗೆ ೧೧ ಗಂಟೆಗೆ ಲೋಕಸಭೆಯಲ್ಲಿ ಬಜೆಟ್ ಮಂಡನೆಯ ಪ್ರಕ್ರಿಯೆ ಆರಂಭವಾಗುತ್ತದೆ ಎಂದು ನವದೆಹಲಿಯಲ್ಲಿ ಇಂದು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ತಿಳಿಸಿದ್ದಾರೆ.

ಈ ಹಿಂದೆ, ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು, ಜನವರಿ ೨೮ ರಿಂದ ಆರಂಭವಾಗುವ ಬಜೆಟ್ ಅಧಿವೇಶನದ ಮೊದಲ ಹಂತವು ಫೆಬ್ರವರಿ ೧೩ರಂದು ಮುಕ್ತಾಯಗೊಳ್ಳಲಿದೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರದ ಶಿಫಾರಸಿನ ಮೇರೆಗೆ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಬಜೆಟ್ ಅಧಿವೇಶನ ೨೦೨೬ಕ್ಕಾಗಿ ಸಂಸತ್ತಿನ ಎರಡೂ ಸದನಗಳನ್ನು ಕರೆಯಲು ಅನುಮೋದನೆ ನೀಡಿದ್ದಾರೆ.

*****************

ಮೂಡುಬಿದಿರೆಯ ಆಳ್ವಾಸ್ ಸ್ವರಾಜ್ ಮೈದಾನದಲ್ಲಿ ಆಯೋಜನೆಯಾಗಿರುವುದು ಕೇವಲ ಅಥ್ಲೆಟಿಕ್ ಮೀಟ್ ಅಲ್ಲ. ಸತ್ಪ್ರಜೆಗಳ ನಿರ್ಮಾಣಕ್ಕೆ ಮತ್ತು ಬಲಿಷ್ಠ ಭಾರತ ನಿರ್ಮಿಸಲು ಹಾಕಿದ ಭದ್ರ ಬುನಾದಿ ಎಂದು ವಿಧಾನಸಭಾ ಸ್ಪೀಕರ್ ಯು.ಟಿ.ಖಾದರ್ ಅಭಿಪ್ರಾಯಪಟ್ಟರು.

ದಕ್ಷಿಣ ಕನ್ನಡ ಜಿಲ್ಲೆಯ ಮೂಡುಬಿದಿರೆಯ ಸ್ವರಾಜ್ ಮೈದಾನದಲ್ಲಿ ಇದೇ ೧೬ರವರೆಗೆ ಆಯೋಜಿಸಿರುವ ೮೫ನೇ ಅಖಿಲ ಭಾರತ ಪುರುಷ ಹಾಗೂ ಮಹಿಳೆಯರ ವಿಭಾಗದ ಅಂತರ್‌ವಿಶ್ವವಿದ್ಯಾಲಯ ಮಟ್ಟದ ಅಥ್ಲೆಟಿಕ್ ಚಾಂಪಿಯನ್‌ಶಿಪ್ ಪಂದ್ಯಾವಳಿಗೆ ಇಂದು ಚಾಲನೆ ನೀಡಿ ಮಾತನಾಡಿದ ಅವರು, ವಿಶ್ವದ ಸಂಸ್ಕೃತಿಯನ್ನು ನೋಡಬೇಕಾದರೆ ಭಾರತವನ್ನು ನೋಡಬೇಕು. ಭಾರತದ ಸಂಸ್ಕೃತಿಯನ್ನು ಕರ್ನಾಟಕದಲ್ಲಿ ಕಾಣಲು ಸಾಧ್ಯ. ಈ ವರ್ಷದ ಕ್ರೀಡಾಕೂಟ ಯಶಸ್ವಿಯಾಗಲಿ ಎಂದು ಶುಭ ಹಾರೈಸಿದರು.

ವಿಧಾನಪರಿಷತ್ ಸದಸ್ಯರ ಎಸ್.ಎಲ್.ಭೋಜೇಗೌಡ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಕುಲಪತಿ ಡಾ.ಭಗವಾನ್ ಬಿ.ಸಿ, ಆಳ್ವಾಸ್ ಪ್ರತಿಷ್ಠಾನದ ಅಧ್ಯಕ್ಷ ಡಾ.ಎಂ.ಮೋಹನ್ ಆಳ್ವ, ಮಾಜಿ ಸಚಿವ ಅಭಯಚಂದ್ರ ಜೈನ್ ಮತ್ತಿತರರು ಉಪಸ್ಥಿತರಿದ್ದರು.

ದೇಶದ ೩೧೨ಕ್ಕೂ ಅಧಿಕ ವಿಶ್ವವಿದ್ಯಾಲಯಗಳ ೪ ಸಾವಿರದ ೨೮೮ ಅಥ್ಲೀಟ್‌ಗಳು ಈ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದಾರೆ.

*****************

ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ-ಡಿಆರ್‌ಡಿಓ ಚಲಿಸುವ ವಸ್ತುಗಳ ಮೇಲೆ ಪೂರ್ಣ ಸಾಮರ್ಥ್ಯದಲ್ಲಿ ದಾಳಿ ಮಾಡುವ ಶಕ್ತಿ ಇರುವ, ಮ್ಯಾನ್- ಪೋರ್ಟಬಲ್ ಆಂಟಿ ಟ್ಯಾಂಕ್ ಗೈಡೆಡ್ ಕ್ಷಿಪಣಿಯ ಯಶಸ್ವಿಯಾಗಿ ಹಾರಾಟ ಪರೀಕ್ಷೆ ನಿನ್ನೆ ಹೈದರಾಬಾದ್‌ನಲ್ಲಿ ನಡೆಸಿದೆ.

ಈ ಯಶಸ್ವಿ ಪರೀಕ್ಷೆಗೆ ಡಿಆರ್‌ಡಿಒ, ಅದರ ಪಾಲುದಾರರು ಹಾಗೂ ಕೈಗಾರಿಕಾ ವಲಯವನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಭಿನಂದಿಸಿದ್ದಾರೆ. ಈ ಪರೀಕ್ಷೆ ಆತ್ಮನಿರ್ಭರ ರಾಷ್ಟ್ರ ನಿರ್ಮಾಣದತ್ತ ಒಂದು ಮಹತ್ವದ ಹೆಜ್ಜೆಯಾಗಿದೆ ಎಂದು ಅವರು ಹೇಳಿದರು.

*****************

ನವಿ ಮುಂಬೈನ ಡಾ. ಡಿ.ವೈ. ಪಾಟೀಲ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮಹಿಳಾ ಪ್ರೀಮಿಯರ್ ಲೀಗ್-ಡಬ್ಲ್ಯೂಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಇಂದು ಟೂರ್ನಿಯ ೫ನೇ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಯುಪಿ ವಾರಿಯರ್ಸ್ ತಂಡ ಮುಖಾಮುಖಿಯಾಗಿದೆ.

ಟಾಸ್ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

*****************

ಸ್ವಾಮಿ ವಿವೇಕಾನಂದರ ೧೬೩ನೇ ಜನ್ಮ ವಾರ್ಷಿಕೋತ್ಸವದ ಅಂಗವಾಗಿ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್ ಇಂದು ಅವರಿಗೆ ಗೌರವ ನಮನ ಸಲ್ಲಿಸಿದರು.

ಸ್ವಾಮಿ ವಿವೇಕಾನಂದರ ವ್ಯಕ್ತಿತ್ವವು ಸದಾ ಯುವಜನತೆಗೆ ಆದರ್ಶವಾಗಿ ಉಳಿಯುತ್ತದೆ ಮತ್ತು ಅವರ ಚಿಂತನೆಗಳು ಮಾತೃಭೂಮಿ ಭಾರತದ ಹೆಮ್ಮೆಯನ್ನು ಸದಾ ಪ್ರಕಾಶಮಾನಗೊಳಿಸುತ್ತವೆ. ಅಭಿವೃದ್ಧಿಯಾದ ಹಾಗೂ ಆತ್ಮನಿರ್ಭರ ಭಾರತಕ್ಕಾಗಿ ತೆಗೆದುಕೊಂಡಿರುವ ಸಂಕಲ್ಪವನ್ನು ಒಟ್ಟಾಗಿ ಮುಂದಕ್ಕೆ ಕೊಂಡೊಯ್ಯುವಂತೆ ಅಶ್ವಿನಿ ವೈಷ್ಣವ್ ಸಾಮಾಜಿಕ ಜಾಲತಾಣದಲ್ಲಿ ದೇಶದ ಜನತೆಗೆ ಮನವಿ ಮಾಡಿದರು.

ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್ ಅವರು ಸ್ವಾಮಿ ವಿವೇಕಾನಂದರಿಗೆ ಗೌರವ ನಮನ ಸಲ್ಲಿಸಿದರು.

*****************

ಅಸಮಾನತೆಗಳನ್ನು ಕಡಿಮೆ ಮಾಡಲು, ಅಂಚಿನಲ್ಲಿರುವ ಸಮುದಾಯಗಳಿಗೆ ಶಕ್ತಿ ನೀಡಲು ಹಾಗೂ ಅಭಿವೃದ್ಧಿ, ದೇಶದ ಪ್ರತಿಯೊಂದು ಮೂಲೆಗೂ ತಲುಪುವಂತೆ ಮಾಡಲು ಶಿಕ್ಷಣವನ್ನು ಬಳಸಬೇಕು ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹೇಳಿದರು.

ನವದೆಹಲಿಯಲ್ಲಿ ಇಂದು ನಡೆದ ಜವಾಹರಲಾಲ್ ನೆಹರು ವಿಶ್ವವಿದ್ಯಾಲಯದ ೯ನೇ ಘಟಿಕೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಶಿಕ್ಷಣವು ವ್ಯಕ್ತಿತ್ವವನ್ನು ರೂಪಿಸುವುದಷ್ಟೇ ಅಲ್ಲದೆ

ಮನಸ್ಸನ್ನು ಬಲಪಡಿಸಿ ಬುದ್ಧಿವಂತಿಕೆಯನ್ನು ವಿಸ್ತರಿಸುತ್ತದೆ. ದೇಶದ ಆರ್ಥಿಕ, ಸಾಮಾಜಿಕ ಮತ್ತು ವೈಜ್ಞಾನಿಕ ಸಮೃದ್ಧಿಗಾಗಿ ಕೆಲಸ ಮಾಡುವಂತೆ ವಿದ್ಯಾರ್ಥಿಗಳಿಗೆ ಮನವಿ ಮಾಡಿದರು.

****************

ನವದೆಹಲಿಯಲ್ಲಿ ಕಾಮನ್ವೆಲ್ತ್‌ನ ಸ್ಪೀಕರ್‌ಗಳು ಮತ್ತು ಸಭಾಧ್ಯಕ್ಷರ ೨೮ನೇ ಸಮ್ಮೇಳನವನ್ನು ಇದೇ ೧೪ ರಂದು ಆಯೋಜಿಸಲಾಗಿದೆ. ಇದೇ ೧೫ರಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಈ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ಇದೇ ೧೬ರವರೆಗೆ ನಡೆಯಲಿರುವ ಮೂರು ದಿನಗಳ ಈ ಸಮ್ಮೇಳನದಲ್ಲಿ ೬೦ಕ್ಕಿಂತ ಹೆಚ್ಚು ಕಾಮನ್‌ವೆಲ್ತ್ ರಾಷ್ಟ್ರಗಳು ಹಾಗೂ ಅರೆ ಸ್ವಾಯತ್ತ ಸಂಸತ್ತುಗಳ ಸ್ಪೀಕರ್‌ಗಳು ಮತ್ತು ಸಭಾಧ್ಯಕ್ಷರು ಭಾಗವಹಿಸಲಿದ್ದಾರೆ.

********ಮುಕ್ತಾಯ********